ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತೊಂದನೆಯ ಅಧಿವೇಶನ
ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ಆಹಾರ ಸುರಕ್ಷತೆ ಮತ್ತು ಗುಣಮಟ್ಟದ ಇಲಾಖೆಯಡಿ ಕೈಗೊಳ್ಳಲಾದ ಕ್ರಮಗಳ ಬಗ್ಗೆ

ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮನಿರ್ದೇಶನ ಹೊಂದಿದವರು ) –

81 (207) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಲ್ಲಿನ ರಾಜ್ಯಮಟ್ಟದ, ಜಿಲ್ಲಾಮಟ್ಟದ ಮತ್ತು ತಾಲ್ಲೂಕು ಮಟ್ಟದ ಕಛೇರಿಗಳಲ್ಲಿ ಮಂಜೂರಾತಿಯಾದ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು, ಹುದ್ದೆವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಲಾಖೆಯಿಂದ ಆಹಾರ ತಯಾರಿಕೆ ಘಟಕಗಳಿಗೆ ಆಕಸ್ಮಿಕವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದ ಪ್ರಕರಣಗಳ ಸಂಖ್ಯೆ ಎಷ್ಟು; ಸಂಗ್ರಹಿಸಿದ ಮತ್ತು ಪರಿಶೀಲಿಸಿದ ಸ್ಯಾಂಪಲ್‌ಗಳ ಸಂಖ್ಯೆ ಎಷ್ಟು; (ಜಿಲ್ಲಾ, ತಾಲ್ಲೂಕು, ತಿಂಗಳುವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಲಾಖೆಯಿಂದ ಪತ್ತೆ ಹಚ್ಚಿದ ಅಸುರಕ್ಷಿತ ಪ್ರಕರಣಗಳ ಸಂಖ್ಯೆ ಎಷ್ಟು; Misbrand ಮತ್ತು Substandard ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾ, ತಾಲ್ಲೂಕುವಾರು, ತಿಂಗಳುವಾರು ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಇಲಾಖೆಯಿಂದ ಆಹಾರ ಅಸುರಕ್ಷತೆ ಕುರಿತು ಜೆ.ಎಂ.ಎಫ್.ಸಿ. ನ್ಯಾಯಾಲಯದಲ್ಲಿ ಹಾಗೂ Misbrand ಮತ್ತು Substandard ಪ್ರಕರಣಗಳ ಕುರಿತು ADC ನ್ಯಾಯಾಲಯದಲ್ಲಿ ದಾಖಲಿಸಿದ ಪ್ರಕರಣಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಆರೋಪ ಸಾಬೀತಾದ ಪ್ರಕರಣಗಳೆಷ್ಟು; ಸಾಬೀತಾಗದ ಪ್ರಕರಣಗಳ ಸಂಖ್ಯೆ ಎಷ್ಟು; ವಿಚಾರಣೆಯ ಹಂತದಲ್ಲಿರುವ ಪ್ರಕರಣಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು, ತಾಲ್ಲೂಕುವಾರು, ವರ್ಷವಾರು, ಪ್ರಕರಣವಾರು ಮಾಹಿತಿ ನೀ